## ಕರ್ನಾಟಕ ವಿಧಾನ ಪರಿಷತ್ತು

| | | |
|---|---|---|
| ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ | : | 166 |
| ಸದಸ್ಯರ ಹೆಸರು | : | ಶ್ರೀ ಎನ್. ರವಿಕುಮಾರ್ |
| ಉತ್ತರಿಸಬೇಕಾದ ದಿನಾಂಕ | : | 16.07.2024 |
| ಉತ್ತರಿಸಬೇಕಾದ ಸಚಿವರು | : | ನಗರಾಭಿವೃದ್ಧಿ ಸಚಿವರು |

| | ಪ್ರಶ್ನೆ | ಉತ್ತರ |
|---|---|---|
| ಅ) | ನವ ಮಂಗಳೂರು ಬಂದರಿನ ನಿರ್ವಸಿತರಿಗೆ ಆಶ್ರಯ ಕಲ್ಪಿಸುವ ನಿಟ್ಟಿನಲ್ಲಿ ದಕ್ಷಿಣ ಕನ್ನಡ ಜಿಲ್ಲೆಯ ಕೃಷ್ಣಾಪುರ ಮತ್ತು ಕಾಟಿಪಳ್ಳ ಗ್ರಾಮವನ್ನು 70ರ ದಶಕದಲ್ಲೇ ಗುರುತಿಸಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; (ವಿವರ ನೀಡುವುದು) | ಬಂದಿದೆ.<br>ಮಂಗಳೂರು ಮಹಾನಗರ ಪಾಲಿಕೆ ಅಸ್ತಿತ್ವಕ್ಕೆ ಬರುವ ಮೊದಲು 1965ನೇ ಇಸವಿಯಲ್ಲಿ ನವ ಮಂಗಳೂರು ಬಂದರು ಮಂಡಳಿಗೆ ಜಾಗವನ್ನು ನೀಡಲು ಭೂಸ್ವಾಧೀನಪಡಿಸಿಕೊಂಡ ಕಾರಣ ಅಲ್ಲಿನ ನಿರ್ವಸಿತರಿಗೆ ನವ ಮಂಗಳೂರು ಬಂದರು ಮಂಡಳಿ ವತಿಯಿಂದ ಈ ಹಿಂದೆ ಸುರತ್ಕಲ್ ಮತ್ತು ಇಡ್ಯಾ ಗ್ರಾಮದಲ್ಲಿನ ಕೆಲವೊಂದು ಜಮೀನಿಗೆ ಕೃಷ್ಣಾಪುರ ಮತ್ತು ಕಾಟಿಪಳ್ಳ ಗ್ರಾಮ ಎಂದು ನಾಮಕರಣ ಮಾಡಿ, 1 ರಿಂದ 9 ಬ್ಲಾಕ್‌ಗಳಾಗಿ ವಿಂಗಡಿಸಿ, ನಿವೇಶನಗಳನ್ನು ರಚಿಸಿ, ನಿರ್ವಸಿತರಿಗೆ ಹಂಚಿಕೆ ಮಾಡಿ ಪುನರ್ವಸತಿ ಕಲ್ಪಿಸಲಾಗಿರುತ್ತದೆ. |
| ಆ) | ವಸತಿ ಪ್ರದೇಶದಲ್ಲಿ ಯಾವ ಯಾವ ಕೈಗಾರಿಕೆಗಳಿಗೆ ಅನುಮತಿ / ನಿರಾಕ್ಷೇಪಣಾ ಪತ್ರ ನೀಡಲಾಗಿದೆ; (ವಿವರ ನೀಡುವುದು) | ಮಂಗಳೂರು ಮಹಾನಗರ ಪಾಲಿಕೆ ವತಿಯಿಂದ ಪ್ರಸ್ತುತ ಯಾವುದೇ ಕೈಗಾರಿಕೆಗಳಿಗೆ ಅನುಮತಿ / ನಿರಾಕ್ಷೇಪಣಾ ಪತ್ರ ನೀಡಿರುವುದಿಲ್ಲ. |
| ಇ) | ಕೃಷ್ಣಾಪುರದ 5ನೇ ಬ್ಲಾಕಿನಲ್ಲಿರುವ ಆಶಾ ಮರದ ಮಿಲ್ಲು ವಸತಿ ಪ್ರದೇಶದಲ್ಲಿದ್ದರೂ ಯಾವ ಕಾರಣಕ್ಕೆ ನಿರಾಕ್ಷೇಪಣಾ ಪತ್ರ ನೀಡಲಾಗಿದೆ; (ವಿವರ ನೀಡುವುದು) | ಕೃಷ್ಣಾಪುರದ 5ನೇ ಬ್ಲಾಕಿನಲ್ಲಿರುವ ಆಶಾ ಮರದ ಮಿಲ್‌ಗೆ ಅರಣ್ಯ ಇಲಾಖೆಯ ವತಿಯಿಂದ ಪರವಾನಿಗೆ ಸಂಖ್ಯೆ: 72/85-86 ರನ್ವಯ ಸಾ ಮಿಲ್ ನಡೆಸಲು ಪರವಾನಿಗೆ ನೀಡಲಾಗಿದ್ದು, ದಿನಾಂಕ 31.03.2025 ರವರೆಗೆ ಊರ್ಜಿತದಲ್ಲಿರುತ್ತದೆ. ಸದರಿ ಉದ್ದಿಮೆಯ ಜಾಗವು ಮಹಾನಗರ ಪಾಲಿಕೆಯ ವ್ಯಾಪ್ತಿಗೊಳಪಡುವ ಮೊದಲೇ ಗ್ರಾಮ ಪಂಚಾಯಿತಿಯಿಂದಲೇ ಪರವಾನಿಗೆಯನ್ನು ನೀಡಲಾಗಿದ್ದು, ನಂತರದಲ್ಲಿ ಪಾಲಿಕೆ ವತಿಯಿಂದ ನವೀಕರಣಗೊಳಿಸಲಾಗಿದೆ. ಪ್ರಸ್ತುತ ಕರ್ನಾಟಕ ರಾಜ್ಯ ಮಾಲಿನ್ಯ ನಿಯಂತ್ರಣ ಮಂಡಳಿಯ ಪತ್ರದನ್ವಯ 2024-25 ನೇ ಸಾಲಿಗೆ ಉದ್ದಿಮೆ ಪರವಾನಿಗೆಯನ್ನು ನವೀಕರಣಗೊಳಿಸಿರುವುದಿಲ್ಲ. |
| ಈ) | ಮಹಾನಗರ ಪಾಲಿಕೆ ವತಿಯಿಂದ ಮಹಾನಗರ ಪಾಲಿಕೆಯ ಆಸ್ತಿಯಾಗಿರುವ ರಸ್ತೆಯ ಇಕ್ಕೆಲಗಳಲ್ಲಿ ಕೃಷ್ಣಾಪುರದ 5ನೇ ಬ್ಲಾಕಿನಲ್ಲಿರುವ ಆಶಾ ಮರದ ಮಿಲ್ಲು ಮರದ ದಿಮ್ಮಿಗಳನ್ನು ಸಂಗ್ರಹಿಸಲು ಅನುಮತಿ ನೀಡಲಾಗಿದೆಯೇ; | ಮಂಗಳೂರು ಮಹಾನಗರ ಪಾಲಿಕೆ ವತಿಯಿಂದ ರಸ್ತೆಯ ಇಕ್ಕೆಲಗಳಲ್ಲಿ ಮರದ ದಿಮ್ಮಿಗಳನ್ನು ಸಂಗ್ರಹಿಸಲು ಯಾವುದೇ ಅನುಮತಿ ನೀಡಿರುವುದಿಲ್ಲ. |
| ಉ) | ರಸ್ತೆಯ ಇಕ್ಕೆಲಗಳಲ್ಲಿ ಮರದ ದಿಮ್ಮಿಗಳನ್ನು ಸಂಗ್ರಹಿಸಲು ಮಹಾನಗರ ಪಾಲಿಕೆಯು ಎಷ್ಟು ಮೊತ್ತದ ಶುಲ್ಕವನ್ನು ಸಂಗ್ರಹಿಸುತ್ತಿದೆ; ಇಲ್ಲವಾದಲ್ಲಿ, ಈ ಅಕ್ರಮದ ಕುರಿತು ಕೈಗೊಂಡ ಕ್ರಮಗಳೇನು? | ರಸ್ತೆಯ ಇಕ್ಕೆಲಗಳಲ್ಲಿ ಮರದ ದಿಮ್ಮಿಗಳನ್ನು ಸಂಗ್ರಹಿಸಲು ಮಂಗಳೂರು ಮಹಾನಗರ ಪಾಲಿಕೆ ವತಿಯಿಂದ ಯಾವುದೇ ಶುಲ್ಕವನ್ನು ವಿಧಿಸಿರುವುದಿಲ್ಲ. ಅನಧಿಕೃತವಾಗಿ ಸಂಗ್ರಹಿಸಿದ್ದ ಮರದ ದಿಮ್ಮಿಗಳನ್ನು ತೆರವುಗೊಳಿಸಲು ಸಂಬಂಧಪಟ್ಟವರಿಗೆ ನೋಟೀಸ್ ನೀಡಿ, ರಸ್ತೆ ಇಕ್ಕೆಲಗಳಲ್ಲಿ ಸಂಗ್ರಹಿಸಿದ್ದ ಮರದ ದಿಮ್ಮಿಗಳನ್ನು ತೆರವುಗೊಳಿಸಲಾಗಿದೆ. |

**ಸಂಖ್ಯೆ: ನಅಇ 46 ಎಂಎಂಸಿ 2024 (ಇ)**

(**ಬಿ.ಎಸ್. ಸುರೇಶ**)
ನಗರಾಭಿವೃದ್ಧಿ ಹಾಗೂ ನಗರ ಯೋಜನೆ ಸಚಿವರು